ದಿನಾಂಕ 09/06/2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು

**ಮುಖ್ಯ ವಿಚಾರಣೆ :- ಶ್ರೀ ವಿ.ಆರ್.ಆರ್. ವಾದಿ ಪರ ವಕೀಲರಿಂದ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ಸತ್ಯವಾಗಿದೆ, ಹಾಗೂ ಸದರಿ ಪ್ರಮಾಣ ಪತ್ರಕ್ಕೆ ನಾನೇ ತಿಳಿದು ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಈ ದಿನ ನೋಟರಿ ರವರ ಮುಂದಿನ ವಂಶವೃಕ್ಷದ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸರ್ವೆ ನಂ-63 ಇದರ ಪಟ್ಟಾ ಪುಸ್ತಕದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಈರಪ್ಪ ಬಿನ್ ಈರಾಜಪ್ಪ ಇವರಿಗೆ ಸಂಬಧಿಸಿದ ಇಂಡೆಕ್ಸ್ ಅಫ್ ಲ್ಯಾಂಡ್ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಸರ್ವೆ ನಂ-43 ರ ಹಿಸ್ಸಾ ಟಿಪ್ಪಣಿಯ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಸರ್ವೆ ನಂ-43 ರ ಕರ್ನಾಟಕ ಆಕಾರ್ ಬಂದ್ ಸೆಟ್ಲಮೆಂಟ್ ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಸರ್ವೆ ನಂ-43/2 ಇದಕ್ಕೆ ಸಂಬಂಧಿಸಿದ ಪಟ್ಟಾ ಮತ್ತು ರಸೀದಿ ಪುಸ್ತಕ ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಎಂ.ಆರ್ ಸಂಖ್ಯೆ ಹೆಚ್-14/2021-22 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಗಂಪಲಹಳ್ಳಿ ಗ್ರಾಮದ ಸರ್ವೆ ನಂ-43/2 ಇದರ ಒಂದು ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಎಂ.ಆರ್ ಸಂಖ್ಯೆ-1/1983-84 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಎಂ.ಆರ್ ಸಂಖ್ಯೆ-5/1998-99 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಗಂಪಲಹಳ್ಳಿ ಸರ್ವೆ ನಂ-43/1 ಇದರ

ಒಂದು ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಗಣಿಸಿ ದಾವೆಯನ್ನು ಡಿಕ್ರಿಗೊಳಿಸಬೇಕಾಗಿ ಕೋರುತ್ತೇನೆ.

( ಪಾಟೀ ಸವಾಲುಃ- ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು , ಪಾಟೀ ಸವಾಲನ್ನು ಮುಂದೂಡಲಾಯಿತು )

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ